AUGUST 31, 2025

**AKASHAVANI - DHARWAD**

**PRADESH SAMACHARA (KANNADA) 12 PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ದೇಶದ ವಿವಿಧೆಡೆಗಳಲ್ಲಿ ಮಳೆಗಾಲದ** ಸಮಯ, ಪ್ರವಾಹ, ಭೂಕುಸಿತ ಸೇರಿದಂತೆ ಹಲವು ಸವಾಲುಗಳು ಎದುರಾಗಿವೆ, ಇಂತಹ ಸಂದರ್ಭ ದೇಶದ ಭದ್ರತಾಪಡೆಗಳು, ರಾಷ್ಟ್ರೀಯ ವಿಕೋಪ ನಿರ್ವಹಣಾ ಪಡೆ, ರಾಜ್ಯ ವಿಪತ್ತು ನಿರ್ವಹಣಾ ಪಡೆ ಸಿಬ್ಬಂದಿಗಳು ಹಗಲಿರುಳು ರಕ್ಷಣಾ ಕಾರ್ಯದಲ್ಲಿ ನಿರತರಾಗಿದ್ದಾರೆ. ಆಧುನಿಕ ತಂತ್ರಜ್ಞಾನದ ಸಹಾಯದೊಂದಿಗೆ ಪರಿಹಾರ ಕಾರ್ಯದಲ್ಲಿ ತೊಡಗಿರುವ ಸೇನೆ, ಸ್ಥಳೀಯರು, ವೈದ್ಯರು, ಸಾಮಾಜಿಕ ಕಾರ್ಯಕರ್ತರ ಸೇವೆ ಅಭಿನಂದನಾರ್ಹ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದರು. ಆಕಾಶವಾಣಿಯ ಜನಪ್ರಿಯ 'ಮನ್ ಕಿ ಬಾತ್' ಸರಣಿಯ, 125 ನೇ ಆವೃತ್ತಿಯಲ್ಲಿ, ದೇಶ ವಿದೇಶಗಳಲ್ಲಿರುವ ಭಾರತೀಯರನ್ನು ಉದ್ದೇಶಿಸಿ ಅವರು ಮಾತನಾಡಿದರು.

<><><>

**ಧ್ವನಿ: ಪ್ರಧಾನಿ ಮೋದಿ 39 ಸೆಕೆಂದುಗಳು**

<><><>

**ಪ್ರಧಾನಮಂತ್ರಿ ನರೇಂದ್ರ ಮೋದಿ** ಅವರ ನೇತೃತ್ವದಲ್ಲಿ, ಕಳೆದ 11 ವರ್ಷಗಳಲ್ಲಿ, ಕಾನೂನು ಅರಿವು ಮೂಡಿಸಲು, ಗ್ರಾಮೀಣ ಭಾಗಕ್ಕೆ ಒತ್ತು ನೀಡಿ, ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು, ಕೇಂದ್ರ ಸಂಸದೀಯ ವ್ಯವಹಾರಗಳ ಖಾತೆ ಸಚಿವ ಕಿರಣ್ ರಿಜಿಜು, ತಿಳಿಸಿದ್ದಾರೆ. ರಾಜ್ಯ ವಕೀಲರ ಪರಿಷತ್, ಬೆಂಗಳೂರಿನಲ್ಲಿ ಆಯೋಜಿಸಿದ್ದ, ವಕೀಲರ ಸಂಘಗಳ ಅಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ಪದಾಧಿಕಾರಿಗಳ ಸಮಾವೇಶವನ್ನು ಉದ್ಘಾಟಿಸಿ, ಮಾತನಾಡಿದರು. ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ, ಅತ್ಯುತ್ತಮವಾಗಿ ಕೆಲಸ ಮಾಡುತ್ತಿದೆ. ಕಾನೂನು ಸೇವಾ ಶಿಬಿರಗಳನ್ನು ಆಯೋಜಿಸುವಲ್ಲಿ, ಕರ್ನಾಟಕ ಮುಂಚೂಣಿಯಲ್ಲಿದೆ. ದೇಶದ ವಿವಿಧ ನ್ಯಾಯಾಲಯಗಳಲ್ಲಿ 5 ಕೋಟಿಗೂ ಅಧಿಕ ಪ್ರಕರಣಗಳು ಇತ್ಯರ್ಥವಾಗದೆ ಬಾಕಿ ಉಳಿದಿವೆ ಎಂದರು. ಸಂಸದ ತೇಜಸ್ವಿ ಸೂರ್ಯ ಪಾಲ್ಗೊಂಡಿದ್ದರು.

<><><>

**ಶಿವಮೊಗ್ಗ ಜಿಲ್ಲೆಯಲ್ಲಿ, ಪ್ರಸಕ್ತ ವರ್ಷದಲ್ಲಿ ಈ ವರೆಗೆ,** 12 ಸಾವಿರದ 136 ನಾಯಿ ಕಡಿತದ ಪ್ರಕರಣಗಳು ವರದಿಯಾಗಿದ್ದು, ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ, ಪ್ರಾಥಮಿಕ ಚಿಕಿತ್ಸೆ ಹಾಗೂ ಲಸಿಕೆಗಳನ್ನು ವ್ಯವಸ್ಥೆ ಮಾಡಲಾಗಿದೆ ಎಂದು, ಜಿಲ್ಲಾಧಿಕಾರಿ ಗುರುದತ್ ಹೆಗಡೆ ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ, ಆರೋಗ್ಯ ಇಲಾಖೆ ಪ್ರಗತಿ ಪರಿಶೀಲಿಸಿ, ಅವರು,

ಮಾತನಾಡಿದರು. ರೋಗ ಬಾಧಿತ ನಾಯಿ, ಬೆಕ್ಕು, ಕುದುರೆ, ಹಂದಿ ಹಾಗೂ ಇಲಿಗಳ ಮೂತ್ರದಿಂದ ಮನುಷ್ಯರಿಗೆ ಹರಡಬಹುದಾದ ಮಾರಣಾಂತಿಕ, 'ಲೆಪ್ಟೊ ಸ್ಪೈರೋಸಿಸ್' ಸೋಂಕು ಹಾಗೂ 'ಕ್ಯಾಸನೂರು ಮಂಗನ ಕಾಯಿಲೆ' ನಿಯಂತ್ರಿಸಲು, ಕ್ರಮ ಕೈಗೊಳ್ಳುವಂತೆ, ಸೂಚಿಸಿದರು.

<><><>

**ಕಲಬುರಗಿ ಜಿಲ್ಲೆಯಲ್ಲಿ ನಿರಂತರವಾಗಿ** ಸುರಿಯುತ್ತಿರುವ ಮಳೆಯ ಹಿನ್ನಲೆ,  ಜಿಲ್ಲೆಯ ಎರಡು ತಾಲೂಕುಗಳಲ್ಲಿ ಬೆಳೆ ಹಾನಿ ಸಂಭವಿಸಿದ್ದು, ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಕಲಬುರಗಿ ಹಾಗೂ ಅಫಜಲಪೂರ ತಾಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ,  ಬೆಳೆಹಾನಿ ಪರಿಶೀಲಿಸಿದರು. ಸ್ಥಳೀಯ ರೈತರ ಸಂಕಷ್ಟ ಆಲಿಸಿ, ಅಧಿಕಾರಿಗಳಿಂದ ಮಾಹಿತಿ ಪಡೆದರು.

<><><>

**ಧಾರವಾಡದ ಕರ್ನಾಟಕ ಕಾಲೇಜು** ವೃತ್ತದಲ್ಲಿ ಪರಿಸರ ಸ್ನೇಹಿ ಗಣಪತಿ ವಿಸರ್ಜನೆಯ ನಿಟ್ಟಿನಲ್ಲಿ ನಗರದ ರೋಟರಿ ಸಂಸ್ಥೆ ಕೃತಕ ಕೊಳದ ವ್ಯವಸ್ಥೆ ಮಾಡಿದೆ. ಪರಿಸರ ಹಾಗೂ ಜಲಮೂಲಗಳ ಸಂರಕ್ಷಣೆ ಕಾಳಜಿಯಿಂದ ಕಳೆದ 8 ವರ್ಷಗಳಿಂದ ಈ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ರೋಟರಿ ಕ್ಲಬ್ ಅಧ್ಯಕ್ಷ ಪಿ.ಕೆ ನಂದ್ಯಾಳಕರ್ ತಿಳಿಸಿದ್ದಾರೆ. ಇಂದು ಸಂಜೆ 5 ಗಂಟೆಗೆ ನಗರದ ವಿವಿಧ ಸಾರ್ವಜನಿಕ ಗಣೇಶೋತ್ಸವ ಸಮಿತಿಗಳಡಿ ಪೂಜಿಸಲಾದ, ಗಣಪತಿ ಮೂರ್ತಿಗಳನ್ನು ಮೆರವಣಿಗೆಯ ಮೂಲಕ ತಂದು ವಿಸರ್ಜಿಸಬಹುದಾಗಿದ್ದು, ಇದರ ಪ್ರಯೋಜನ ಪಡೆಯುವಂತೆ ಕೋರಿದ್ದಾರೆ.

<><><>

**ಕಲಬುರಗಿ ಜಿಲ್ಲೆಯಾದ್ಯಂತ ಗಣೇಶ ಹಬ್ಬದ** ಆಚರಣೆ ಹಿನ್ನೆಲೆ, ಇಂದು ಬೆಳಗ್ಗೆ 6 ಗಂಟೆಯಿಂದ ನಾಳೆ ಬೆಳಗ್ಗೆ 6 ಗಂಟೆಯವರೆಗೆ ಎಲ್ಲ ತರಹದ ಮದ್ಯ ಮಾರಾಟವನ್ನು ನಿಷೇಧಿಸಿ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಆದೇಶ ಹೊರಡಿಸಿದ್ದಾರೆ.

<><><>

**ಮೈಸೂರಿನ ಮುದ್ದರಾಮ** ಪ್ರತಿಷ್ಠಾನ ಕೊಡಮಾಡುವ 2025 ನೇ ಸಾಲಿನ ಪ್ರಶಸ್ತಿಗೆ ವಿದ್ವಾಂಸ ಟಿ.ವಿ ವೆಂಕಟಾಚಲ ಶಾಸ್ತ್ರೀ ಅವರನ್ನು ಆಯ್ಕೆ ಮಾಡಲಾಗಿದೆ. ಪ್ರಶಸ್ತಿ 50 ಸಾವಿರ ರೂಪಾಯಿ ಗೌರವಧನ ಹಾಗೂ ಫಲಕ ಒಳಗೊಂಡಿದೆ.

<><><>

**ಭಾರತೀಯ ವಿದ್ಯಾಭವನ ಹಾಗೂ** ವಿನಾಯಕ ಗೋಕಾಕ್ ವಾಙ್ಮಯ ಟ್ರಸ್ಟ್ ಜಂಟಿಯಾಗಿ ನೀಡುವ 2025 ನೇ ಸಾಲಿನ ವಿ.ಕೃ ಗೋಕಾಕ್ ಪ್ರಶಸ್ತಿಗೆ ಸಾಹಿತಿ ಧಾರವಾಡದ ಆನಂದ ಪಾಟೀಲ ಆಯ್ಕೆಯಾಗಿದ್ದಾರೆ. ಪ್ರಶಸ್ತಿ 25 ಸಾವಿರ ರೂಪಾಯಿ ನಗದು ಹಾಗೂ ಫಲಕ ಒಳಗೊಂಡಿದೆ. ಸೆಪ್ಟೆಂಬರ್ 7 ರಂದು ಬೆಂಗಳೂರು,  ಭಾರತೀಯ ವಿದ್ಯಾಭವನದಲ್ಲಿ ಜರುಗುವ ಸಮಾರಂಭದಲ್ಲಿ ಅವರು ಪ್ರಶಸ್ತಿ ಸ್ವೀಕರಿಸಲಿದ್ದಾರೆ.

<><><>

**ಅಮೇರಿಕದ ಫ್ಲೋರಿಡಾ ರಾಜ್ಯದ** ಟಂಕಾ ನಗರದಲ್ಲಿ ಆಯೋಜಿತ, 8 ನೇ ವಿಶ್ವ ಕನ್ನಡ ಸಮಾವೇಶದಲ್ಲಿ ಕರ್ನಾಟಕ ವಿಧಾನಸಭೆಯ ವಿಪಕ್ಷ ಉಪ ನಾಯಕ ಅರವಿಂದ ಬೆಲ್ಲದ ಪಾಲ್ಗೊಂಡು ಮಾತನಾಡಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>